For more job news visit : www.kpscvaani.com

ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್.04/2024–25(ಆರ್.ಪಿ.ಸಿ) ದಿನಾಂಕ: 26.01.2026

ಪ್ರಕಟಣೆ

ಉಳಿಕೆ ಮೂಲ ವೃಂದದ ವಿವಿಧ ಹುದ್ದೆಗಳ ನೇಮಕಾತಿ ಸಂಬಂಧ ನಡೆಸಲಾದ ಸ್ಪರ್ಧಾತ್ಮಕ ಪರೀಕ್ಷೆಗಳ ಕೀ ಉತ್ತರಗಳನ್ನು ಪ್ರಕಟಿಸಿರುವ ಬಗ್ಗೆ.

ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ವಿವಿಧ ಇಲಾಖೆ/ಮಂಡಳಿ/ನಿಗಮ/ಸಂಸ್ಥೆಗಳಲ್ಲಿನ ಉಳಿಕೆ ಮೂಲ ವೃಂದದ ವಿವಿಧ ಹುದ್ದೆಗಳ ನೇಮಕಾತಿ ಸಂಬಂಧ ದಿನಾಂಕ 25.01.2026 ರಂದು ನಡೆಸಿದ ಸ್ಪರ್ಧಾತ್ಮಕ ಪರೀಕ್ಷೆಗಳ ಕೀ ಉತ್ತರಗಳನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ದಿನಾಂಕ 27.01.2026 ರಂದು ಪ್ರಕಟಿಸಲಾಗಿರುತ್ತದೆ.

ಪ್ರಕಟಿತ ಕೀ ಉತ್ತರಗಳಿಗೆ ಆಕ್ಷೇಪಣೆಗಳಿದ್ದಲ್ಲಿ, ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಒದಗಿಸಲಾದ ಆನ್‌ಲೈನ್ ಪೋರ್ಟಲ್ https://cetonline.karnataka.gov.in/kea ಮೂಲಕ ದಿನಾಂಕ 29.01.2026 ಬೆಳಿಗ್ಗೆ 09.00 ಘಂಟೆಯೊಳಗೆ ಸಲ್ಲಿಸಬಹುದಾಗಿದೆ.

ಆಕ್ಷೇಪಣೆಗಳನ್ನು ಸಲ್ಲಿಸುವ ಸಂದರ್ಭದಲ್ಲಿ ಪತ್ರಿಕೆಯ ವಿವರ, ಪರೀಕ್ಷಾ ದಿನಾಂಕ, ವರ್ಷನ್ ಕೋಡ್, ಪ್ರಶ್ನೆ ಸಂಖ್ಯೆ ಹಾಗೂ ಪೂರಕ ದಾಖಲೆಗಳನ್ನು PDF ರೂಪದಲ್ಲಿ ಸಲ್ಲಿಸಬೇಕು. ಸಲ್ಲಿಸಲಾಗುವ ಪ್ರತಿ ಆಕ್ಷೇಪಣೆಗೆ ರೂ. 25/– ನ್ನು ಪಾವತಿಸತಕ್ಕದ್ದು, ಹಾಗೂ ಆಕ್ಷೇಪಣೆ ಶುಲ್ಕವನ್ನು ಹಿಂದಿರುಗಿಸಲಾಗುವುದಿಲ್ಲ. ಪ್ರಶ್ನೆ ಸಂಖ್ಯೆ, ವರ್ಷನ್ ಕೋಡ್ ನಮೂದಿಸದೇ ಇರುವ ಅಥವಾ ಅಪೂರ್ಣ/ಆಧಾರರಹಿತವಾಗಿರುವ ಹಾಗೂ ಶುಲ್ಕ ಪಾವತಿಸದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ವಿಷಯ ತಜ್ಞರ ಸಮಿತಿಯು ಪರಿಶೀಲಿಸಿ ತೀರ್ಮಾನಿಸುವ ಕೀ ಉತ್ತರಗಳು ಅಂತಿಮವಾಗಿರುತ್ತದೆ.

ಕಾರ್ಯನಿರ್ವಾಹಕ ನಿರ್ದೇಶಕರು

18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012
18th Cross, Sampige Road, Malleshwaram, Bengaluru - 560 012.
Phone: 080 - 23 564 583 Helpline : 080 - 23 460 460.
e-mail : keauthority-ka@nic.in Website : http://kea.kar.nic.in